# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು ಇವರಿಗೆ ಸಂಚಿತ ಸಂಭಾವನೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 229 ವಿಸೇಬಿ 2014,ದಿ:12-02-2016.

2) ವಿಚಾರಣಾಧಿಕಾರಿಯವರ ವಿಚಾರಣಾ ವರದಿ ದಿನಾಂಕ: 30-03-2017.

-000-

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಹಿರಿಯೂರು ತಾಲ್ಲೂಕಿನ ಯರಬಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಡೆದಿರುವ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಆರ್. ರಮೇಶ್ ಹಾಗೂ ಶ್ರೀ ಜಿ. ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳು, ಹಿರಿಯೂರು ಇವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಪ್ರಕರಣಕ್ಕೆ ಸಂಬಂಧಿಸಿದಂತೆ ಜಂಟಿ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯಾಗಿ ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ನೇಮಿಸಲಾಗಿತ್ತು. ಸದರಿಯವರು ಪ್ರಕರಣದ ಇಲಾಖಾ ವಿಚಾರಣೆಯನ್ನು ನಡೆಸಿ, ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿ:30-03-2017ರ ಪತ್ರದೊಂದಿಗೆ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಸಂಭಾವನೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು, ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ, ವಿಚಾರಣಾಧಿಕಾರಿಗಳಿಗೆ ಅವರ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 229 ವಿಸೇಬಿ 2014, ಬೆಂಗಳೂರು ದಿನಾಂಕ:29-07-2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು ಇವರಿಗೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 45 ಸೇಇವಿ 2014 ದಿನಾಂಕ:08-01-2015 ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 20,000/- (ಇಪ್ಪತ್ತು ಸಾವಿರ ರೂಪಾಯಿಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಇವರು ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ ಸದರಿ ಮೊತ್ತವನ್ನು ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

29/7/17

(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, (ಎ&ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ
3. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು, ಮನೆ ನಂ 1242,4ನೇ ಮುಖ್ಯ ರಸ್ತೆ, 8ನೇ ಕ್ರಾಸ್,ಚಂದ್ರಲೇಔಟ್,ಬೆಂಗಳೂರು-40.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ 2), ಗ್ರಾ.ಅ.&ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
5. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.